ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/01/ಐಡಿಪಿ/2019-20

ಸಂಯೋಜನಾಧಿಕಾರಿಯವರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01,
ದಿನಾಂಕ:20-01-2020

ಸುತ್ತೋಲೆ

ವಿಷಯ: ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸುವ ಕುರಿತು.
ಉಲ್ಲೇಖ: ಸರ್ಕಾರದ ಅಧೀನ ಕಾರ್ಯದರ್ಶಿಯವರ:ಸಿಆಸುಇ 1ರಾರಾಆ 2020
ದಿನಾಂಕ: 08-01-2020

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಮತದಾರರ ದಿನವನ್ನು ಪ್ರತಿ ವರ್ಷದಂತೆ ಈ ವರ್ಷವೂ ಜನವರಿ 25 ರಂದು ಪ್ರತಿಜ್ಞೆಯನ್ನು ಸ್ವೀಕರಿಸುವ ಮೂಲಕ ಮತದಾರರ ದಿನವನ್ನು ಆಚರಿಸಲು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಅಡಿಯಲ್ಲಿರುವ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ತಿಳಿಸಲಾಗಿದೆ. (ಪ್ರತಿಜ್ಞಾ ಪತ್ರದ ಪ್ರತಿ) ಲಗತ್ತಿಸಲಾಗಿದೆ. ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಿದ ವರದಿಯನ್ನು ಅಂಚೆ ಮೂಲಕ ನಿರ್ದೇಶನಾಲಯಕ್ಕೆ ಹಾಗೂ ಪ್ರತಿಯನ್ನು ನಿರ್ದೇಶನಾಲಯದ ಇ-ಮೇಲ್ ವಿಳಾಸ nssdte@gmail.com ಗೆ ಕಳುಹಿಸಲು ಸೂಚಿಸಲಾಗಿದೆ.

ನಿರ್ದೇಶಕರು,

ಇವರಿಗೆ,
ರಾಜ್ಯದ ಎಲ್ಲಾ ಸರ್ಕಾರಿ /ಅನುದಾನಿತ/ಖಾಸಗಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ - ಸೂಕ್ತ ಕ್ರಮಕ್ಕಾಗಿ

ಪ್ರತಿ:
1] ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ರಾಜಕೀಯ), ಬೆಂಗಳೂರು
2] ಇ-ಗೌರ್ನರ್ಸ್ ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
3] ಕಚೇರಿ ಕಡತಕ್ಕೆ

# "ರಾಷ್ಟ್ರೀಯ ಮತದಾರರ ದಿನದ ಪ್ರತಿಜ್ಞೆ"

ಪ್ರಜಾಪ್ರಭುತ್ವದಲ್ಲಿ ದೃಢವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೆ ಮತ ಚಲಾಯಿಸುತ್ತೇವೆಂದು ಈ ಮೂಲಕ ಪ್ರತಿಜ್ಞೆ ಸ್ವೀಕರಿಸುತ್ತೇವೆ.